**DECEMBER 21,2024**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ಭಾರತೀಯ ರೈಲ್ವೇಯ, 101 ಜನ ಉದ್ಯೋಗಿಗಳಿಗೆ ಇಂದು ಹೊಸ ದಿಲ್ಲಿಯ ಭಾರತ ಮಂಟಪಂ ನಲ್ಲಿ ಆಯೋಜಿಸಿರುವ ಸಮಾರಂಭದಲ್ಲಿ, ಅತಿ ವಿಶಿಷ್ಟ ರೈಲು ಸೇವಾ ಪುರಸ್ಕಾರ ಪ್ರದಾನ ಮಾಡಲಾಗುತ್ತಿದೆ. ಕೇಂದ್ರ ರೈಲ್ವೆ ಖಾತೆ ಸಚಿವ ಅಶ್ವಿನಿ ವೈಷ್ಣವ್ ಅವರು ಪುರಸ್ಕಾರ ಪ್ರದಾನ ಮಾಡಲಿದ್ದಾರೆ. ಪ್ರಶಸ್ತಿ ಪುರಸ್ಕೃತರಲ್ಲಿ, ನೈಋತ್ಯ ರೈಲ್ವೆಯ ನಾಲ್ವರು ಉದ್ಯೋಗಿಗಳು ಸೇರಿದ್ದಾರೆ. ನೈಋತ್ಯ ರೈಲ್ವೆ ಮೈಸೂರು ವಿಭಾಗದ, ದಾವಣಗೆರೆಯ ಶಿವಾನಂದ ಟಿ, ಹುಬ್ಬಳ್ಳಿ ಡೀಸೆಲ್ ಲೋಕೊ ಶೆಡ್ ನ ಟೆಕ್ನಿಶಿಯನ್ ದಿನೇಶ ಗೋಲೆನವರ್, ಬೆಂಗಳೂರು ವಿಭಾಗದ ಟೆಕ್ನಿಶಿಯನ್ ರಾಜಾ ಹಾಗೂ ಹುಬ್ಬಳ್ಳಿ ವಿಭಾಗದ ಟ್ರ್ಯಾಕ್ ನಿರ್ವಾಹಕ ಶ್ರೀಜಿತ್ ಜೆ.ಬಿ ಅವರಿಗೆ ಅತಿ ವಿಶಿಷ್ಟ ರೈಲು ಸೇವಾ ಪುರಸ್ಕಾರ ಘೋಷಿಸಲಾಗಿದೆ.

<><><>

ಬೆಳಗಾವಿ ಸುವರ್ಣಸೌಧದಲ್ಲಿ, 8 ದಿನಗಳ ಕಾಲ ನಡೆದ ವಿಧಾನಸಭಾ ಅಧಿವೇಶನದಲ್ಲಿ, ಮಹತ್ವದ 13 ವಿಧೇಯಕಗಳು ಅಂಗೀಕಾರಗೊಂಡಿವೆ ಹಾಗೂ ಉತ್ತರ ಕರ್ನಾಟಕ ಭಾಗದ ಅಭಿವೃದ್ಧಿ ಕುರಿತಂತೆ ಚರ್ಚೆ ನಡೆದಿದ್ದು, ಶಾಸಕರು ಸಕ್ರಿಯರಾಗಿ ಭಾಗವಹಿಸಿದ್ದರು ಎಂದು ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಮಡಿಕೇರಿಯಲ್ಲಿ ತಿಳಿಸಿದ್ದಾರೆ.

<><><>

ಯು.ಟಿ ಖಾದರ್ ಧ್ವನಿ 28 ಸೆಕೆಂದುಗಳು

<><><>

'ಕ್ಷಯ ಮುಕ್ತ ಭಾರತ' –2025 ಆಂದೋಲನದ ಅಡಿ, ರಾಷ್ಟ್ರೀಯ ಕ್ಷಯ ರೋಗ ನಿರ್ಮೂಲನಾ ಕಾರ್ಯಕ್ರಮ, 2025ರ ಮಾರ್ಚ್ 17ರ ವರೆಗೆ, ದೇಶಾದ್ಯಂತ ಜರುಗಲಿದೆ. 100 ದಿನಗಳ 'ಟಿ.ಬಿ. ಮುಕ್ತ ಭಾರತ' ಪ್ರಚಾರ ಆಂದೋಲನ, ಚಿತ್ರದುರ್ಗ ಜಿಲ್ಲೆಯಲ್ಲಿ ಆಯೋಜಿಸಲಾಗಿದೆ. ತಾಲೂಕು ಆರೋಗ್ಯಾಧಿಕಾರಿ ಡಾಕ್ಟರ್ ಬಿ.ವಿ.ಗಿರೀಶ್ ಮಾತನಾಡಿ, ಕ್ಷಯ ರೋಗ ಪತ್ತೆ ಮತ್ತು ಚಿಕಿತ್ಸೆ ಮೂಲಕ, 2023ರ ವೇಳೆಗೆ, ಸಂಪೂರ್ಣ ಕ್ಷಯ ಮುಕ್ತ ಭಾರತವನ್ನು ಕಟ್ಟಲು ಸಂಕಲ್ಪಿಸಲಾಗಿದೆ. ಚಿತ್ರದುರ್ಗ

ತಾಲೂಕಿನ ಒಟ್ಟು 286 ಹಳ್ಳಿಗಳ ಪೈಕಿ, ದಿನಕ್ಕೆ ನಾಲ್ಕು ಹಳ್ಳಿಗಳಲ್ಲಿ, ಕ್ಷಯ ಪತ್ತೆ ಸಮೀಕ್ಷೆ ನಡೆದಿದೆ ಎಂದರು. ಸದ್ಯ ಭಾರತದಲ್ಲಿ, ಪ್ರತಿ ವರ್ಷ 28 ಲಕ್ಷದ 40 ಸಾವಿರ ಜನ ಕ್ಷಯ ರೋಗಕ್ಕೆ ತುತ್ತಾಗುತ್ತಿದ್ದು, 5 ಲಕ್ಷ ಜನ ಕ್ಷಯದಿಂದ ಸಾವನ್ನಪ್ಪುತ್ತಿದ್ದಾರೆ.

<><><>

ಕನಕದಾಸರು ಜಾತಿ ಪದ್ಧತಿ ವಿರುದ್ಧ ಹೋರಾಡಿ, ಸಮಾನತೆಯ ಸಂದೇಶ ಸಾರಿದ ಮಹನೀಯ ಎಂದು ದಾವಣಗೆರೆ ವಿಶ್ವವಿದ್ಯಾಲಯದ ಉಪ ಕುಲಪತಿ ಬಿ.ಡಿ ಕುಂಬಾರ ಹೇಳಿದರು. ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ, ಕನಕ ಅಧ್ಯಯನ ಪೀಠದ ವತಿಯಿಂದ, ಕನಕ ಜಯಂತಿ ಅಂಗವಾಗಿ ಆಯೋಜಿತ, 'ಕನಕದಾಸರ ತಾತ್ವಿಕತೆ; ಆಧುನಿಕ ಸಮಾಜದ ಪರಿಕಲ್ಪನೆ' ಉಪನ್ಯಾಸ ಕಾರ್ಯಕ್ರಮದ, ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.  ಹಂಪಿ ಕನ್ನಡ ವಿಶ್ವವಿದ್ಯಾಲಯದ ವಿಶ್ರಾಂತ ಉಪ ಕುಲಪತಿ ಮಲ್ಲಿಕಾ ಘಂಟಿ ಅವರು ಮಾತನಾಡಿ, ಕೀರ್ತನೆಗಳ ಮೂಲಕ ಸಂದೇಶಗಳನ್ನು ಕನಕದಾಸರು ಕಟ್ಟಿಕೊಟ್ಟಿದ್ದಾರೆ ಎಂದರು.

<><><>

ಶಿವಮೊಗ್ಗ ಜಿಲ್ಲೆ ಶಿಕಾರಿಪುರದ, ಬಾಲಕಿಯರ ಸರ್ಕಾರಿ ಪ್ರೌಢ ಶಾಲೆ ಹಾಗೂ ಸರ್ಕಾರಿ ಸಹ ಶಿಕ್ಷಣ ಪ್ರೌಢ ಶಾಲೆಗಳನ್ನು, ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ ಉನ್ನತೀಕರಿಸಲಾಗುವುದು ಎಂದು, ಶಾಲಾ ಶಿಕ್ಷಣ ಖಾತೆ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ. ಶಿಕಾರಿಪುರದ ಬಾಲಕಿಯರ ಸರ್ಕಾರಿ ಪ್ರೌಢ ಶಾಲೆ, 1868ರಲ್ಲಿ ಆರಂಭವಾಗಿದ್ದು, ಪ್ರಸ್ತುತ ಸಾವಿರದ 300 ವಿದ್ಯಾರ್ಥಿಗಳು, ವಿದ್ಯಾಭ್ಯಾಸ ಮಾಡುತ್ತಿದ್ದಾರೆ. ಸುತ್ತಮುತ್ತಲಿನ ಗ್ರಾಮಗಳಿಂದ ಬರುವ ವಿದ್ಯಾರ್ಥಿನಿಯರಿಗೆ, ಉಚಿತ ಸಾರಿಗೆ ವ್ಯವಸ್ಥೆ ಒದಗಿಸಲು, ಕ್ರಮ ಕೈಗೊಳ್ಳುವುದಾಗಿ ಸಚಿವರು ತಿಳಿಸಿದರು.ಈಗಾಗಲೇ ಶಿಕಾರಿಪುರ ತಾಲೂಕಿನ ಈಸೂರು, ಹೊಸೂರು, ಬಗಣಕಟ್ಟೆ ಗ್ರಾಮದ ಸರ್ಕಾರಿ ಶಾಲೆಗಳನ್ನು ಕೆ.ಪಿ.ಎಸ್ ಶಾಲೆಗಳನ್ನಾಗಿ ಪರಿವರ್ತಿಸಿ, ಅಗತ್ಯ ಸೌಲಭ್ಯಗಳನ್ನು ನೀಡಲಾಗುತ್ತಿದೆ, ಎಂದರು.

<><><>

ರೇಷ್ಮೆ ಕೃಷಿಯಲ್ಲಿ, 28 ರಾಜ್ಯಗಳ ಪೈಕಿ, ಕರ್ನಾಟಕ ರಾಜ್ಯ, ದೇಶಕ್ಕೆ ಪ್ರಥಮ ಸ್ಥಾನದಲ್ಲಿದೆ ಎಂದು ಕೇಂದ್ರ ರೇಷ್ಮೆ ಮಂಡಳಿ ಸದಸ್ಯ ಕಾರ್ಯದರ್ಶಿ ಪಿ.ಶಿವಕುಮಾರ ತಿಳಿಸಿದ್ದಾರೆ. ಚಿತ್ರದುರ್ಗದ ಎಸ್.ಜೆ. ಕಲ್ಯಾಣಮಂಟಪದಲ್ಲಿ, ಕೇಂದ್ರ ರೇಷ್ಮೆ ಸಂಶೋಧನೆ ಮತ್ತು ತರಬೇತಿ ಸಂಸ್ಥೆ, 'ರೇಷ್ಮೆ ಕೃಷಿ–ಐಸಿರಿಗೆ ದಾರಿ' ಎಂಬ ಧ್ಯೇಯದೊಂದಿಗೆ ಆಯೋಜಿಸಿದ, ರೇಷ್ಮೆ ಕೃಷಿ ಮೇಳ ಉದ್ಘಾಟಿಸಿ, ಅವರು ಮಾತನಾಡಿದರು. ಸ್ವಯಂ ಚಾಲಿತ ರೇಷ್ಮೆ ನೂಲಿನ ಯಂತ್ರ ಖರೀದಿಗೆ, ಕೇಂದ್ರ ಸರ್ಕಾರ ಶೇಕಡ 50 ರಷ್ಟು ಹಾಗೂ ರಾಜ್ಯ ಸರ್ಕಾರ ಶೇಕಡ 25 ರಷ್ಟು ಸಹಾಯಧನ ನೀಡುತ್ತಿದೆ ಎಂದರು. ರೇಷ್ಮೆ ಕೃಷಿ ವಸ್ತು ಪ್ರದರ್ಶನ ಗಮನ ಸೆಳೆಯುವಂತಿತ್ತು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..

<><><>